**ಪ್ರಧಾನ  ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ  315/2015**

| | | | |
|---|---|---|---|
| ಸಾಕ್ಷಿದಾರರ ಹೆಸರು | | ಹೆಚ್ ಎನ್ ಮಹೇಶ | ಪ್ರಾ ಸಾಃ 8 |
| ತಂದೆಯ/ಗಂಡನ ಹೆಸರು | | ಹೆಚ್ ಎನ್ ನಂಜಪ್ಪ | ಚಾಸಾಃ 9 |
| ವಯಸ್ಸು | | 48 | |
| ಕೆಲಸ | | ವ್ಯವಸಾಯ | ಸಾ ಪ್ರ ಬೋ |
| ವಾಸ | | ಹುಲ್ಲಹಳ್ಳಿ ಗ್ರಾಮ | ದಿಃ  11.07.2023 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ಅಮಾನತ್ತು ಮಹಜರ್ ನಲ್ಲಿರುವ ಸಹಿಯನ್ನು ಈಗ ನೋಡಿ ಗುರುತಿಸಿದ್ದು,  ಇದನ್ನು ನಿಪಿ 3 ಎಂದು,  ಸಹಿಯನ್ನು ನಿಪಿ 3 (ಬಿ) ಎಂದು ಗುರುತಿಸಲಾಯಿತು.  ಈಗ್ಗೆ ಸುಮಾರು 8 ವರ್ಷಗಳ ಹಿಂದೆ  ನಾನು ಪೊಲೀಸರ ಕೋರಿಕೆಯ ಮೇರೆಗೆ ಠಾಣೆಯಲ್ಲಿ ನಿಪಿ 3 ಕ್ಕೆ ಸಹಿ ಮಾಡಿರುತ್ತೇನೆ. ನಿಪಿ 3 ರಲ್ಲಿರುವ ವಿಚಾರ ನನಗೆ ಗೊತ್ತಿರುವುದಿಲ್ಲ. ಪೊಲೀಸ್‌ರು ನನಗೆ ಓದಿ ಹೇಳಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ನ್ಯಾಯಾಲಯದ ಮುಂದಿರುವ ಮುದ್ದೆ ಮಾಲು 1 ರ ಸಮವಸ್ತ್ರವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

( ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾನೆ. ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು  ಅನುಮತಿ ನೀಡಲಾಯಿತು )

**ಪಾಟೀ ಸವಾಲುಃ ಶ್ರೀ ಎಪಿಪಿ ಯವರಿಂದಃ**

ದಿನಾಂಕ 02.10.2014 ರಂದು ಹುಲ್ಲಹಳ್ಳಿ ಪೊಲೀಸ್ ಠಾಣೆಯ ಆವರಣದಲ್ಲಿ ಚಾಸಾ 2 ರವರು ಹಾಜರುಪಡಿಸಿದ ನ್ಯಾಯಾಲಯದ ಮುಂದಿರುವ ಮುದ್ದೆ ಮಾಲು 1 ರ

ಸಮವಸ್ತ್ರವನ್ನು ನನ್ನ ಮತ್ತು ಚಾಸಾ-8 ರವರ ಸಮಕ್ಷಮ ಬೆಳಗ್ಗೆ 09.00 ರಿಂದ 09.30 ರವರೆಗೆ ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-3 ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಎಲ್ಲಾ ಗೊತ್ತಿದ್ದರೂ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು ಶ್ರೀ ವಕೀಲರಿಂದ ಆರೋಪಿ ಪರವಾಗಿಃ ಏನು ಇಲ್ಲಾ</u>**

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**ಪ್ರಧಾನ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**